**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1**

ದಿನಾಂಕ: 19.08.2016

ಸಂಖ್ಯೆ: ಸಿ8[7] ಶಾಶಿಅ/ಮಾನ್ಯತೆ ನವೀಕರಣ/01/2015-16

**ಸುತ್ತೋಲೆ**

ವಿಷಯ: ರಾಜ್ಯದಲ್ಲಿನ ಅನುದಾನ ರಹಿತ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ/ ಹಾಜರಾತಿ ಕನಿಷ್ಠಕ್ಕಿಂತ ಕಡಿಮೆ ಇರುವ ಶಾಲೆಗಳಿಗೆ ಮಾನ್ಯತೆ ನವೀಕರಿಸುವ ಬಗ್ಗೆ.

ಉಲ್ಲೇಖ:1. ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಪ್ರಾಥಮಿಕ & ಪ್ರೌಢಶಿಕ್ಷಣ ಸಂಸ್ಥೆಗಳ) ಮಾನ್ಯತೆ ನಿಯಮಗಳು-1999,ನಿಯಮ-99(4)(ಕೆ).

2. ಸರ್ಕಾರದ ಆದೇಶ ಸಂಖ್ಯೆ: ಇಡಿ 324 ಎಸ್‌ಎಲ್‌ಬಿ 2015, ದಿ: 29.10.2015.
3. ಈ ಕಚೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ: 27.11.2015.
4. ಸರ್ಕಾರದ ಸುತ್ತೋಲೆ ಸಂಖ್ಯೆ ದಿನಾಂಕ: 02.11.2006.
5. ಕಚೇರಿಯ ಸುತ್ತೋಲೆ ಸಂಖ್ಯೆ: ಸಿ8(7)ಶಾಶಿಅ/ಅಧಿಕ ವಿಭಾಗ/2001-02, ದಿ: 17.08.2002.
6. ಕರ್ನಾಟಕ ಅನುದಾನ ರಹಿತ ಶಾಲೆಗಳ ಆಡಳತ ಮಂಡಳಗಳ ಸಂಘ(ರಿ) ಬೆಂಗಳೂರು, ಇವರ ಮನವಿ ದಿನಾಂಕ: 01.07.2016.

&&&&&&

ರಾಜ್ಯದಲ್ಲಿನ ಖಾಸಗಿ ಅನುದಾನ ರಹಿತ ಪ್ರೌಢಶಾಲೆಗಳಲ್ಲಿನ ವಿದ್ಯಾರ್ಥಿಗಳ ದಾಖಲಾತಿ/ಹಾಜರಾತಿ ಪ್ರತಿ ತರಗತಿಗಳಲ್ಲಿ ಕನಿಷ್ಠ 25 ಕಾಯ್ದುಕೊಳ್ಳುವಂತೆ, ಉಲ್ಲೇಖ-1ರ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಪ್ರಾಥಮಿಕ/ಪ್ರೌಢಶಿಕ್ಷಣ) ಮಾನ್ಯತೆ ನಿಯಮಗಳು-1999, ನಿಯಮ(4)(ಕೆ)ನಲ್ಲಿ ಸ್ಪಷ್ಟಪಡಿಸಿದೆ.

ಅದರಂತೆ, ಉಲ್ಲೇಖ-2ರಲ್ಲಿ ಸರ್ಕಾರದಿಂದ ಅನುಮತಿ ನೀಡಿದ ನಂತರ ಉಲ್ಲೇಖ-3ರಲ್ಲಿ ಈ ಕಛೇರಿಯಿಂದ ಸುತ್ತೋಲೆ ಹೊರಡಿಸಿ, ರಾಜ್ಯದಲ್ಲಿನ ಎಲ್ಲಾ ಅನುದಾನ ರಹಿತ ಪ್ರೌಢಶಾಲೆಗಳಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು, ಪ್ರತಿ ತರಗತಿಯಲ್ಲಿ ದಾಖಲಾತಿ/ಹಾಜರಾತಿ ಇದ್ದಲ್ಲಿ ಮಾನ್ಯತೆ ನವೀಕರಣ ಮಾಡಬಹುದು ಎಂದು ತಿಳಿಸಿದೆ.

ಅನುದಾನ ಸಂಹಿತೆ-16(11)ರಲ್ಲಿ ವಿದ್ಯಾರ್ಥಿಗಳ ಹಾಜರಾತಿ ಕೊರತೆ ಮನ್ನಾ ಮಾಡಲು ವಿಶೇಷ ಸಂಧರ್ಭದಲ್ಲಿ ಮಾತ್ರ ಹಾಜರಾತಿ ಕೊರತೆ ಮನ್ನಾಗೆ ಅವಕಾಶ ಕಲ್ಪಿಸಲಾಗಿದೆ. ಇಂತಹ ವಿಶೇಷ ಸಂದರ್ಭಗಳಲ್ಲಿ 02 ವರ್ಷಗಳಿಗೆ ಅನ್ವಯವಾಗುವಂತೆ ವಿದ್ಯಾರ್ಥಿಗಳ ಹಾಜರಾತಿ ಕೊರತೆ ಮನ್ನಾ ಮಾಡಲಾಗುತ್ತಿದೆ.

ಪ್ರಸ್ತುತ ಅನುದಾನ ರಹಿತ ಪ್ರೌಢ ಶಾಲೆಗಳಲ್ಲಿ ಮಾನ್ಯತೆ ನವೀಕರಣ ಮಾಡಲು ಪ್ರತಿ ತರಗತಿಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇರುವುದರಿಂದ, ಹಾಜರಾತಿ/ದಾಖಲಾತಿ ಮನ್ನಾ ಮಾಡಿ ಒಂದು ಬಾರಿಗೆ ಮಾನ್ಯತೆ ನವೀಕರಣ ಮಾಡಲು ಅವಕಾಶ ನೀಡಲಾಗಿದೆ. ಆದರೆ, ಒಂದು ಬಾರಿ ಮನ್ನಾ ಮಾಡಿದ ನಂತರವೂ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಠ 25ನ್ನು ಕಾಯ್ದುಕೊಳ್ಳುವಲ್ಲಿ ವಿಫಲವಾಗಿರುವ ಶಾಲೆಗಳು 2ನೇ ಬಾರಿಗೆ ಮಾನ್ಯತೆ ನವೀಕರಣ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಇಂತಹ ಅನುದಾನ ರಹಿತ ಪ್ರೌಢ ಶಾಲೆಗಳಲ್ಲಿ ಮಾನ್ಯತೆ ನವೀಕರಣ ಇಲ್ಲದೆ ಇರುವುದರಿಂದ ಅಂತಹ ಶಾಲೆಗಳ ವಿದ್ಯಾರ್ಥಿಗಳಿಗೆ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಕುಳಿತುಕೊಳ್ಳಲು ತೊಂದರೆಯಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.

ಈ ವಿಚಾರದಲ್ಲಿ ಕರ್ನಾಟಕ ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿಗಳ ಸಂಘ(ರಿ) ಬೆಂಗಳೂರು, ಇವರ ವತಿಯಿಂದ ಸರ್ಕಾರಕ್ಕೆ/ಆಯುಕ್ತರಿಗೆ ಉಲ್ಲೇಖ(6)ರಲ್ಲಿ ಮನವಿ ಸಲ್ಲಿಸಿ, ಈ ಕೆಳಕಂಡ ಅಂಶಗಳನ್ನು ಪ್ರಸ್ತಾಪಿಸಿರುತ್ತಾರೆ.

- ಅನುದಾನ ರಹಿತ ಪ್ರೌಢಶಾಲೆಗಳಲ್ಲಿ ಕನಿಷ್ಠ 25ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಇರುವಂತಹ ಶಾಲೆಗಳನ್ನು ಮುಚ್ಚಲು ಇಲಾಖೆಯಿಂದ ಕ್ರಮವಹಿಸಲಾಗುತ್ತಿದೆ.
- ಆದರೆ, ಇಂತಹ ಅನುದಾನ ರಹಿತ ಪ್ರೌಢಶಾಲೆಗಳಿಗೆ ಸರ್ಕಾರದಿಂದ ಯಾವುದೇ ರೀತಿಯ ಅನುದಾನ ನೀಡಲಾಗುತ್ತಿಲ್ಲ. ಶಾಲೆಯ ಸಂಪೂರ್ಣ ಜವಾಬ್ದಾರಿ ಮತ್ತು ಆಡಳಿತ/ಆರ್ಥಿಕ ನಿರ್ವಹಣೆ ಸಂಪೂರ್ಣ ಜವಾಬ್ದಾರಿ ಆಡಳಿತ ಮಂಡಳಿಯದ್ದೇ ಆಗಿರುತ್ತದೆ.
- ಆದ ಕಾರಣ, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕನಿಷ್ಠ 25ಕ್ಕಿಂತ ಕಡಿಮೆ ದಾಖಲಾತಿ/ಹಾಜರಾತಿ ಇರುವ ಶಾಲೆಗಳಿಗೆ ಮಾನ್ಯತೆ ನವೀಕರಣ ಮಾಡಿದಲ್ಲಿ, ಸರ್ಕಾರಕ್ಕೆ ಯಾವುದೇ ಹೆಚ್ಚುವರಿ ಆರ್ಥಿಕ ಹೊರೆ ಉಂಟಾಗುವುದಿಲ್ಲ.

ಈ ಹಿನ್ನೆಲೆಯಲ್ಲಿ ಖಾಸಗಿ ಅನುದಾನ ರಹಿತ ಪ್ರೌಢಶಾಲೆಗಳ ಆಡಳಿತ ಮಂಡಳಿಯವರು ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತಹ ಶಾಲೆಗಳ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇದ್ದರೂ ಸಹ ಅಂತಹ ಶಾಲೆಗಳಿಗೆ ಮಾನ್ಯತೆಯನ್ನು ಮಾಡದೇ ಇರುವ ಬಗ್ಗೆ ಪರಿಶೀಲಿಸಿದೆ. ಆದ್ದರಿಂದ, ಖಾಸಗಿ ಅನುದಾನ ರಹಿತ ಪ್ರೌಢಶಾಲೆಗಳಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪ್ರತಿ ತರಗತಿ ವಿದ್ಯಾರ್ಥಿಗಳ ಸಂಖ್ಯೆ 25ಕ್ಕಿಂತ ಕಡಿಮೆ ಇದ್ದರೂ ಸಹ ಅಂತಹ ಶಾಲೆಗಳಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಕರ್ಯವನ್ನು ಆಡಳಿತ ಮಂಡಳಿ ಒದಗಿಸಿರುವುದನ್ನು ಖಚಿತಪಡಿಸಿಕೊಂಡು ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ 2016-17ನೇ ಸಾಲಿಗೆ ಮಾತ್ರ ಮಾನ್ಯತೆ ನವೀಕರಣ ಮಾಡಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಅನುಮತಿ ನೀಡಿದೆ.

ಈ ರೀತಿ ಕನಿಷ್ಠ 25 ಮಕ್ಕಳ ಸಂಖ್ಯೆಗಿಂತ ಕಡಿಮೆ ಹಾಜರಾತಿ ಇರುವ ಅನುದಾನ ರಹಿತ ಪ್ರೌಢಶಾಲೆಗಳ ಮಾನ್ಯತೆ ನವೀಕರಣ ಮಾಡುವ ಸಂದರ್ಭದಲ್ಲಿ ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿನ ಉಳಿದ ಎಲ್ಲಾ ಷರತ್ತುಗಳು ಪೂರೈಸಿರುವುದನ್ನು ಮಾನ್ಯತೆ ನವೀಕರಣ ಪ್ರಾಧಿಕಾರಿಗಳಾದ ಆಯಾ ಜಿಲ್ಲಾ ಉಪ ನಿರ್ದೇಶಕರು ಕಡ್ಡಾಯವಾಗಿ ಖಚಿತಪಡಿಸಿಕೊಳ್ಳತಕ್ಕದ್ದು ಎಂದು ಸ್ಪಷ್ಟಪಡಿಸಿದೆ.

"ಮಾನ್ಯ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ)
ರವರ ಟಿಪ್ಪಣಿಯಲ್ಲಿನ ಆದೇಶದಂತೆ"

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಪ್ರತಿಯನ್ನು:

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಗುಲ್ಬರ್ಗಾ.
2. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಉಪನಿರ್ದೇಶಕರುಗಳಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
4. ಕಛೇರಿ ಪ್ರತಿ.

D:\EST-2 FOLDERS\jnapana.docx